RNU AIR DHARWAD

# MAY 28 2024
# ALL INDIA RADIO- DHARWAD
# PRADESH SAMACHARA (KANNADA) 7:05 AM

ಮುಖ್ಯಾಂಶಗಳು

- ವಿಕಸಿತ ಭಾರತದ ಪರಿಕಲ್ಪನೆ ಸಾಕಾರಗೊಳಿಸಲು ವೈದ್ಯಕೀಯ ಕ್ಷೇತ್ರದ ಕೊಡುಗೆ ಅಪಾರ – ಉಪ ರಾಷ್ಟ್ರಪತಿ ಜಗದೀಪ್ ಧನ್‌ಕರ್.
- ದಾವಣಗೆರೆಯ ಚನ್ನಗಿರಿ ಪೊಲೀಸ್ ಠಾಣೆ ದಾಳಿ ಪ್ರಕರಣ; ತನಿಖಾ ವರದಿ ಬಳಿಕ ತಪ್ಪಿತಸ್ಥರ ವಿರುದ್ಧ ಶಿಸ್ತು ಕ್ರಮ – ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್.
- ಶುದ್ಧ ಕುಡಿಯುವ ನೀರು ಪೂರೈಸಲು ಕ್ರಮ ಕೈಗೊಳ್ಳುವಂತೆ ಸಚಿವ ಶರಣ ಬಸಪ್ಪ ದರ್ಶನಾಪುರ ಅಧಿಕಾರಿಗಳಿಗೆ ಸೂಚನೆ.
- ಮುಂಬರುವ ದಿನಗಳಲ್ಲಿ ಶಿಕ್ಷಕರ ನೇಮಕಾತಿ ಪ್ರಕ್ರಿಯೆಗೆ ಚಾಲನೆ – ಶಿಕ್ಷಣ ಖಾತೆ ಸಚಿವ ಮಧು ಬಂಗಾರಪ್ಪ.

ಈಗ ವಾರ್ತೆಗಳ ವಿವರ

2047ರಲ್ಲಿ ವಿಕಸಿತ ಭಾರತದ ಪರಿಕಲ್ಪನೆಯನ್ನು ಸಾಕಾರಗೊಳಿಸುವ ದಿಸೆಯಲ್ಲಿ ವೈದ್ಯಕೀಯ ಕ್ಷೇತ್ರದ ಕೊಡುಗೆಯೂ ಅಪಾರವಾಗಿದೆ ಎಂದು ಉಪ ರಾಷ್ಟ್ರಪತಿ ಜಗದೀಪ್ ಧನ್‌ಕರ್ ಹೇಳಿದ್ದಾರೆ. ಬೆಳಗಾವಿಯ ಸಾಂಪ್ರದಾಯಿಕ ಔಷಧಾಲಯ ಉದ್ಘಾಟನೆ ಹಾಗೂ ಸಂಶೋಧನಾ ಸಂಸ್ಥೆಯ 18ನೇ ಸಂಸ್ಥಾಪನಾ ದಿನಾಚರಣೆಯ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ದೇಶದಲ್ಲಿ ಸಾಂಪ್ರದಾಯಿಕ ಜ್ಞಾನ, ಆಲೋಚನೆಗಳು, ಆರೋಗ್ಯ ಮತ್ತು ಸಾಂಸ್ಕೃತಿಕ ಚೈತನ್ಯ ಯಾವಾಗಲೂ ಗಮನ ಸೆಳೆದಿವೆ. ಸಾಂಪ್ರದಾಯಿಕ ಔಷಧ ಪದ್ಧತಿಯಲ್ಲಿ ಹೆಚ್ಚಿನ ಸಂಶೋಧನೆಯ ಅಗತ್ಯವಿದ್ದು, ಇದರಿಂದ ಸಮಾಜಕ್ಕೂ ಅನುಕೂಲವಾಗಲಿದೆ ಎಂದು ತಿಳಿಸಿದರು. ಕೆ.ಎಲ್.ಇ. ಸಂಸ್ಥೆಯ 14,ನೇ ಘಟಿಕೋತ್ಸವ ಉದ್ಘಾಟಿಸಿ ಮಾತನಾಡಿದ ಉಪ ರಾಷ್ಟ್ರಪತಿ ಜಗದೀಶ್ ಧನಕರ, ಪದವಿ ಪಡೆದ ತಕ್ಷಣ ಕಲಿಕೆ ಸ್ಥಗಿತಗೊಳಿಸದೆ, ಅದು ನಿರಂತರ ಮತ್ತು ಜೀವನದ ಅತ್ಯಂತ ಸ್ಥಿರವಾದ ಒಡನಾಡಿಯಾಗಿರಬೇಕು ಎಂದು ತಿಳಿಸಿದರು. ಬೆಂಗಳೂರಿನ ರಾಷ್ಟ್ರೀಯ ವೈಮಾಂತರಿಕ್ಷ ಪ್ರಯೋಗಾಲಯಕ್ಕೆ ಉಪ ರಾಷ್ಟ್ರಪತಿಯವರು ಭೇಟಿ ನೀಡಿ, ಪರಿಶೀಲಿಸಿ, ಅಧಿಕಾರಿಗಳಿಂದ ಮಾಹಿತಿ ಪಡೆದರು. ಬಳಿಕ ಮಾತನಾಡಿದ ಅವರು, ಭಾರತ ಒಂದು ಅವಕಾಶಗಳ ತಾಣ. ಈಗಾಗಲೇ ಹಲವಾರು ಪೈಲಟ್‌ಗಳಿಗೆ ತರಬೇತಿ ನೀಡಿ, ಅವರನ್ನು ಸಜ್ಜುಗೊಳಿಸಲಾಗಿದೆ ಎಂದರು. ರಾಷ್ಟ್ರೀಯ ವೈಮಾಂತರಿಕ್ಷ ಪ್ರಯೋಗಾಲಯ ಹಲವು ಹೊಸ ಪ್ರಯೋಗಗಳಿಗೆ ಸಾಕ್ಷಿಯಾಗಿದೆ. ವೈಮಾಂತರಿಕ್ಷ ಕ್ಷೇತ್ರದಲ್ಲಿ ಸಂಶೋಧನೆ ಮತ್ತು ಅಭಿವೃದ್ಧಿ ದೇಶದ ಪ್ರಗತಿಗೆ ಕೊಡುಗೆ ನೀಡುತ್ತಿದೆ. ಭಾರತದ ಅಮೃತ ಕಾಲದ ಸಂದರ್ಭದಲ್ಲಿ ಇನ್ನಷ್ಟು ಪ್ರಗತಿ ಕಾಣುತ್ತಿದೆ. ವೈಮಾಂತರಿಕ್ಷ ಕ್ಷೇತ್ರದಲ್ಲಿ ಭಾರತ ಗಮನಾರ್ಹ ಸಾಧನೆ ಮಾಡಿದೆ. ಕೇಂದ್ರ ಸರ್ಕಾರವು ಎಲ್ಲ ರೀತಿಯ ಸಹಾಯ, ಸಹಕಾರ ನೀಡುತ್ತಿದೆ. ಯುವ ಜನತೆ ಅವಕಾಶಗಳನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದರು.

*******

ದಾವಣಗೆರೆಯ ಚನ್ನಗಿರಿ ಪೊಲೀಸ್ ಠಾಣೆ ಮೇಲಿನ ದಾಳಿ ಪ್ರಕರಣಕ್ಕೆ ಸಂಬಂಧಿಸಿದಂತೆ ತಪ್ಪಿತಸ್ಥರು ಯಾರೇ ಇದ್ದರೂ ಅವರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ. ಬೆಂಗಳೂರಿನಲ್ಲಿ ನಿನ್ನೆ ಸುದ್ದಿಗಾರರಿಗೆ ಈ ಮಾಹಿತಿ ನೀಡಿದ ಅವರು, ಸಂವಿಧಾನದ ಆಶಯದಂತೆ ಎಲ್ಲ ಸಮುದಾಯಗಳನ್ನು ಸಮಾನವಾಗಿ ಕಾಣುವುದು ನಮ್ಮ ಉದ್ದೇಶ. ಈಗಾಗಲೇ ಚನ್ನಗಿರಿ ಪೊಲೀಸ್ ಠಾಣೆ ಮೇಲಿನ ದಾಳಿ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿಯವರು ತನಿಖೆಗೆ ಆದೇಶಿಸಿದ್ದಾರೆ. ತನಿಖಾ ಕಾರ್ಯ ಪ್ರಗತಿಯಲ್ಲಿದೆ ಎಂದರು.

*******

ಯಾದಗಿರಿ ಜಿಲ್ಲೆಯ ಗ್ರಾಮೀಣ ಹಾಗೂ ನಗರ ಪ್ರದೇಶಗಳ ವ್ಯಾಪ್ತಿಯಲ್ಲಿ ನಾಗರಿಕರಿಗೆ ಶುದ್ಧ ಕುಡಿಯುವ ನೀರನ್ನು ಪೂರೈಸಲು ಕ್ರಮ ಕೈಗೊಳ್ಳುವಂತೆ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಯಾದಗಿರಿ ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಬರ ಪರಿಹಾರ ಹಾಗೂ ಕುಡಿಯುವ ನೀರು ಮತ್ತು ಮುಂಗಾರು ಪೂರ್ವ ಸಿದ್ಧತೆಗಳ ಬಗ್ಗೆ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಜನರಿಗೆ ಶುದ್ಧ ಕುಡಿಯುವ ನೀರು ಪೂರೈಕೆಯಾಗಬೇಕು. ನೀರಿನ ಮೂಲಗಳಿಂದ ಪರೀಕ್ಷೆಗೆ ಒಳಪಡಿಸಿ ಶುದ್ಧ ಕುಡಿಯುವ ನೀರನ್ನು ಪೂರೈಸಲು ವಿಶೇಷ ಗಮನ ನೀಡಬೇಕು. ಮುಂಗಾರು ಹಂಗಾಮಿನಲ್ಲಿ ರೈತರಿಗೆ ತೊಂದರೆ ಆಗದಂತೆ ನಿಗಾ ವಹಿಸಬೇಕು. ಕೃಷಿ ಇಲಾಖೆ ಅಧಿಕಾರಿಗಳು ಕ್ಷೇತ್ರವಾರು ಭೇಟಿ ನೀಡಿ ಕಳಪೆ ಬೀಜ, ರಸಗೊಬ್ಬರ ಪೂರೈಕೆ ಆಗದಂತೆ ನಿಗಾ ವಹಿಸಬೇಕು. ತಪ್ಪಿತಸ್ಥರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದರು.

*******

ಅನುದಾನಿತ ಶಾಲೆಗಳಿಗೆ ಕಳೆದ ಒಂಬತ್ತು ವರ್ಷಗಳಲ್ಲಿ ಶಿಕ್ಷಕರ ನೇಮಕವಾಗಿಲ್ಲ ಬಜೆಟ್‌ನಲ್ಲಿ ಶಿಕ್ಷಕರ ನೇಮಕಕ್ಕೆ ಅನುದಾನ ಮೀಸಲಿಡಲಾಗಿದೆ. ಮುಂದಿನ ದಿನಗಳಲ್ಲಿ ನೇಮಕಾತಿ ಪ್ರಕ್ರಿಯೆಗೆ ಚಾಲನೆ ನೀಡಲಾಗುವುದು ಎಂದು ಶಿಕ್ಷಣ ಖಾತೆ ಸಚಿವ ಮಧು ಬಂಗಾರಪ್ಪ ಹೇಳಿದ್ದಾರೆ. ಚಿತ್ರದುರ್ಗದಲ್ಲಿ ಆಗ್ನೇಯ ಶಿಕ್ಷಕರ ಚುನಾವಣೆ ಹಿನ್ನಲೆಯಲ್ಲಿ, ಕಾಂಗ್ರೆಸ್ ಅಭ್ಯರ್ಥಿ ಶ್ರೀನಿವಾಸ್ ಪರ ಮತಯಾಚನೆ ಮಾಡಿದ ಅವರು, ಕೌನ್ಸಿಲಿಂಗ್ ನಲ್ಲಿ ಶಿಕ್ಷಕರಿಗೆ ಆಗುತ್ತಿರುವ ಸಮಸ್ಯೆಗಳ ಬಗ್ಗೆ ಸರಕಾರದ ಗಮನವಿದ್ದು ಅದನ್ನು ಬಗೆಹರಿಸಲಾಗುವುದು ಎಂದರು.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ.

*******

ಮಾಜಿ ಪ್ರಧಾನಿ ದಿವಂಗತ ಪಂಡಿತ್ ಜವಾಹರಲಾಲ್ ನೆಹರೂ ಅವರ ಪುಣ್ಯತಿಥಿಯನ್ನು ನಿನ್ನೆ ಆಚರಿಸಲಾಯಿತು. ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನಸೌಧ ಪರಿಸರದಲ್ಲಿನ ನೆಹರೂ ಅವರ ಪ್ರತಿಮೆಗೆ ಪುಷ್ಪಾರ್ಚನೆ ಮಾಡಿ ನಮನ ಸಲ್ಲಿಸಿದರು. ಈ ಬಗ್ಗೆ ಟ್ವೀಟ್ ಮಾಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ 'ಪಂಡಿತ್ ನೆಹರೂರವರು ಭಾರತವನ್ನು ಆರ್ಥಿಕ ಅಭಿವೃದ್ಧಿ ಹಾಗೂ ಸಾಮಾಜಿಕ ಸುಧಾರಣೆ ಕ್ರಮಗಳ ಮೂಲಕ ಸ್ವತಂತ್ರ, ಸ್ವಾವಲಂಬಿ ಮತ್ತು ಜಾತ್ಯಾತೀತ ರಾಷ್ಟ್ರವನ್ನಾಗಿ ಕಟ್ಟಿ ಸ್ಫೂರ್ತಿಯಾದರು ಎಂದರು.

*******

ಇಂದು ಸ್ವಾತಂತ್ರ್ಯ ಹೋರಾಟಗಾರ ವಿನಾಯಕ ದಾಮೋದರ ಸಾವರ್ಕರರ್ ಅವರ 141 ನೇ ಜನ್ಮ ವಾರ್ಷಿಕ ದಿನ. ಸಾವರ್ಕರ್ ಅವರ ಸ್ವಾತಂತ್ರ್ಯ ಹೋರಾಟದ ಹಾದಿ ಹಾಗೂ ಅವರ ಅಗಣಿತ ಸೇವೆಯನ್ನು ಇಂದು ದೇಶದ ವಿವಿಧೆಡೆಗಳಲ್ಲಿ ಸ್ಮರಿಸಲಾಗುತ್ತದೆ.

*******

ವಿಧಾನ ಪರಿಷತ್ತಿನ ಕರ್ನಾಟಕ ಈಶಾನ್ಯ ಪದವೀಧರರ ಕ್ಷೇತ್ರದ ಬಿಜೆಪಿ–ಜೆಡಿಎಸ್ ಮೈತ್ರಿಕೂಟದ ಅಭ್ಯರ್ಥಿ ಅಮರನಾಥ ಪಾಟೀಲ ಪರ ಕೇಂದ್ರ ಸಚಿವ ಭಗವಂತ ಖೂಬಾ ನಿನ್ನೆ ಬೀದರಿನಲ್ಲಿ ಬಿರುಸಿನ ಪ್ರಚಾರ ನಡೆಸಿದರು. ಬೀದರ್‌ನ ಲಿಂಗರಾಜ ಅಪ್ಪ ಎಂಜಿನಿಯರಿಂಗ್ ಕಾಲೇಜು, ಗುರುನಾನಕ ದೇವ ಎಂಜಿನಿಯರಿಂಗ್ ಕಾಲೇಜು ಹಾಗೂ ಕಮಠಾಣ ಸಮೀಪದ ಕರ್ನಾಟಕ ಪಶು ವೈದ್ಯಕೀಯ ವಿಶ್ವವಿದ್ಯಾಲಯದಲ್ಲಿ ಕರಪತ್ರ ವಿತರಿಸಿ ಮತಯಾಚಿಸಿದರು.

*******

ಸದನದಲ್ಲಿ ಶಿಕ್ಷಕರ ಸಮಸ್ಯೆಗಳಿಗೆ ಧ್ವನಿಯಾಗಿ ಪ್ರಶ್ನೆ ಮಾಡಲು ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಡಿ.ಟಿ ಶ್ರೀನಿವಾಸ್ ಅವರಿಗೆ ಶಿಕ್ಷಕರು ಪ್ರಥಮ ಪ್ರಾಶಸ್ತ್ಯದ ಮತ ನೀಡಿ ಗೆಲ್ಲಿಸುವಂತೆ ಶಾಸಕ ಕೊತ್ತೂರು .ಜಿ. ಮಂಜುನಾಥ್ ಕೋಲಾರದಲ್ಲಿ ಮನವಿ ಮಾಡಿದ್ದಾರೆ. ಆಗ್ನೇಯ ಶಿಕ್ಷಕರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಪರವಾಗಿ ವಿವಿಧ ಶಾಲಾ–ಕಾಲೇಜುಗಳಿಗೆ ಭೇಟಿ ನೀಡಿ ಮತಯಾಚನೆ ಸಂದರ್ಭದಲ್ಲಿ ಮಾತನಾಡಿದ ಅವರು ರಾಜ್ಯದಲ್ಲಿ ಕಾಂಗ್ರೆಸ್ ಸರಕಾರವಿದ್ದು,

ಕಾಂಗ್ರೆಸ್ ಅಭ್ಯರ್ಥಿ ಸ್ವತಃ ಶಿಕ್ಷಣ ಸಂಸ್ಥೆಗಳನ್ನು ಹೊಂದಿದ್ದಾರೆ. ಶೈಕ್ಷಣಿಕ ಕ್ಷೇತ್ರದ ಸಮಸ್ಯೆಗಳ ಬಗ್ಗೆ ಅರಿವು ಇರುವ ಹಿನ್ನೆಲೆ, ಅವರನ್ನು ಆಯ್ಕೆ ಮಾಡಿದರೆ ನಮ್ಮೊಂದಿಗೆ ಜೊತೆಯಾಗಿ ಕೆಲಸ ಮಾಡಲು ಸಾಧ್ಯವಾಗುತ್ತದೆ ಎಂದರು. ರಾಜ್ಯದಲ್ಲಿ ಕಾಂಗ್ರೆಸ್ ಸರಕಾರವು ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರಗಳಿಗೆ ಹೆಚ್ಚಿನ ಆದ್ಯತೆಯನ್ನು ನೀಡಿದೆ. ಕಾಂಗ್ರೆಸ್ ಅಭ್ಯರ್ಥಿ ಆಯ್ಕೆಯಾದರೆ ಶಿಕ್ಷಕರ ನಿರೀಕ್ಷೆ ಹುಸಿಯಾಗದಂತೆ ರಾಜ್ಯದಲ್ಲಿ ನಿಮ್ಮಗಳ ಧ್ವನಿಯಾಗಿ ಕೆಲಸ ಮಾಡಲಿದ್ದಾರೆ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಶಿಕ್ಷಣ ಕ್ಷೇತ್ರದಲ್ಲಿ ಅನೇಕ ಬದಲಾವಣೆಗಳಾಗಿವೆ. ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣದ ಪಠ್ಯಕ್ರಮದಲ್ಲಿ ಅನೇಕ ಬದಲಾವಣೆಯನ್ನು ತರಲಾಗಿದೆ ಎಂದರು.

*******

ಕಾಂಗ್ರೆಸ್ ಆಡಳಿತದ ಒಂದು ವರ್ಷದ ಅವಧಿಯಲ್ಲಿ ರಾಜ್ಯದಲ್ಲಿ 900 ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ರಾಜ್ಯದ ಖಜಾನೆ ಖಾಲಿಯಾಗಿದ್ದು, ಮುಂದಿನ ಎರಡು ತಿಂಗಳಲ್ಲಿ ಶಿಕ್ಷಕರಿಗೆ ವೇತನ ಕೊಡಲೂ ಸರ್ಕಾರದಲ್ಲಿ ಹಣವಿಲ್ಲ ಎಂದು ವಿಧಾನಸಭೆಯ ಪ್ರತಿ ಪಕ್ಷ ನಾಯಕ ಆರ್.ಅಶೋಕ್ ವಾಗ್ದಾಳಿ ನಡೆಸಿದ್ದಾರೆ. ಚಿಕ್ಕಬಳ್ಳಾಪುರದಲ್ಲಿ ವಿಧಾನಪರಿಷತ್ತಿನ ಆಗ್ನೇಯ ಶಿಕ್ಷಕರ ಕ್ಷೇತ್ರದ ಬಿಜೆಪಿ–ಜೆಡಿಎಸ್ ಮೈತ್ರಿ ಅಭ್ಯರ್ಥಿ ವೈ.ಎ.ನಾರಾಯಣಸ್ವಾಮಿ ಪರ ಚುನಾವಣಾ ಪ್ರಚಾರ ನಡೆಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರೈತರಿಗೆ ಬಿತ್ತನೆ ಬೀಜ ನೀಡಲು ಸಹ ಸರ್ಕಾರಕ್ಕೆ ಶಕ್ತಿ ಇಲ್ಲ ಎಂದು ದೂರಿದರು.

*******

ಧಾರವಾಡ ಜಿಲ್ಲೆಯಲ್ಲಿ ಮಳೆ ಆರಂಭವಾಗಿರುವ ಹಿನ್ನೆಲೆಯಲ್ಲಿ ಅಂಗನವಾಡಿ, ಶಾಲೆ, ಕಾಲೇಜುಗಳ ಕೋಣೆಗಳು ಸೋರುತ್ತಿರುವ ಬಗ್ಗೆ ಅಧಿಕಾರಿಗಳು ಪರಿಶೀಲಿಸಿ ವಿದ್ಯಾರ್ಥಿಗಳಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ತುರ್ತು ನಿಗಾ ವಹಿಸುವಂತೆ ಜಿಲ್ಲಾಧಿಕಾರಿ ದಿವ್ಯ ಪ್ರಭು ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಬರ ಮುಂಗಾರು ಪೂರ್ವ ಸಿದ್ಧತೆ ಕುರಿತ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಶಿಥಿಲಾವಸ್ಥೆಯಲ್ಲಿರುವ ಹಾಗೂ ಸೋರುತ್ತಿರುವ ಅಂಗನವಾಡಿ, ಶಾಲೆ, ಕಾಲೇಜುಗಳ ಕಟ್ಟಡಗಳನ್ನು ಸಂಬಂಧಪಟ್ಟ ಅಧಿಕಾರಿಗಳು ಪರಿಶೀಲಿಸಿ ತಕ್ಷಣವೇ ಜೂನ್ 30 ರೊಳಗೆ ತಮಗೆ ವರದಿ ಸಲ್ಲಿಸಬೇಕು. ತುರ್ತು ದುರಸ್ತಿ ಕಾರ್ಯ ಅಗತ್ಯವಿದ್ದಲ್ಲಿ ಪ್ರಸ್ತಾವನೆ ಸಿದ್ಧಪಡಿಸಿ ಕಾರ್ಯಪ್ರವತ್ತರಾಗುವಂತೆ ಸೂಚಿಸಿದರು.

*******

ಈಗ ಸಂಕ್ಷಿಪ್ತ ಸುದ್ದಿಗಳು

ಗದಗ ಜಿಲ್ಲೆಯ ನಗರ ಹಾಗೂ ಗ್ರಾಮೀಣ ಪ್ರದೇಶಗಳ ಕಾಲುವೆ ಮತ್ತು ಚರಂಡಿಗಳ ಸ್ವಚ್ಛತೆಗೆ ಆದ್ಯತೆ ನೀಡಬೇಕು. ನೀರು ಪರೀಕ್ಷಿಸಿ ಯೋಗ್ಯವಿದ್ದಲ್ಲಿ ಮಾತ್ರವೇ ಕುಡಿಯಲು ಸರಬರಾಜು ಮಾಡಬೇಕು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

*******

ದೇಶ–ವಿದೇಶಗಳಿಗೆ ತೆರಳಲು, ಸರ್ಕಾರದ ಸೌಲಭ್ಯಗಳನ್ನು ಪಡೆಯಲು, ಜನನ–ಮರಣ ಮಾಹಿತಿ ಪರಿಶೀಲಿಸಲು ಗ್ರಾಮೀಣ ಅಭಿವೃದ್ಧಿ ಅಧಿಕಾರಿ, ಕಾರ್ಯದರ್ಶಿಗಳು ಪ್ರಮುಖ ಪಾತ್ರವಹಿಸುತ್ತಾರೆ ಎಂದು ಜಿಲ್ಲಾ ಪಂಚಾಯತ್ ಯೋಜನಾಧಿಕಾರಿ ಚಿಕ್ಕ – ಸುಬ್ಬಯ್ಯ ಕೋಲಾರದಲ್ಲಿ ತಿಳಿಸಿದ್ದಾರೆ.

*******

ಚಿಕ್ಕಮಗಳೂರು ಜಿಲ್ಲೆಯಲ್ಲಿ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಜುಲೈ 13 ರಂದು ರಾಷ್ಟ್ರೀಯ ಲೋಕ ಅದಾಲತ್‌ನ್ನು ಆಯೋಜಿಸಲಾಗಿದೆ ಎಂದು ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಹನುಮಂತಪ್ಪ .ವಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

*******

ಗದಗ ಜಿಲ್ಲೆಯ ರೈತರಿಗೆ ಬಿತ್ತನೆ ಬೀಜ ಹಾಗೂ ರಸಗೊಬ್ಬರದ ಕೊರತೆಯಾಗದಂತೆ ಸಾಕಷ್ಟು ಪ್ರಮಾಣದಲ್ಲಿ ದಾಸ್ತಾನೀಕರಿಸಲಾಗಿದೆ. ರೈತರು ಯಾವುದೇ ರೀತಿಯ ಆತಂಕಗೊಳ್ಳುವ ಅಗತ್ಯವಿಲ್ಲ ಎಂದು ಗದಗ ಜಿಲ್ಲಾ ಕೃಷಿ ಇಲಾಖೆಯ ಜಂಟಿ ನಿರ್ದೇಶಕಿ ತಾರಾಮಣಿ ಜಿ.ಎಚ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

*******

ಪ್ರಸಕ್ತ ಸಾಲಿನಲ್ಲಿ ಸ್ವಚ್ಛ ಭಾರತ್ ಮಿ ನ್ ಯೋಜನೆಯಡಿ ಕೋಲಾರ ಜಿಲ್ಲೆ ಶೇಕಡ 96 ರ ್ಟ ಸಾಧನೆಗೈದಿರುವುದು ಶ್ಲಾಘನೀಯ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ತಿಳಿಸಿದ್ದಾರೆ.

*******